# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 389(437)
ಸದಸ್ಯರ ಹೆಸರು : ಶ್ರೀ ಐವನ್ ಡಿ' ಸೋಜಾ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 19-07-2024
ಉತ್ತರಿಸುವ ಸಚಿವರು : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಂಕಣಿ ಸಾಹಿತ್ಯ ಅಕಾಡೆಮಿ ಕಟ್ಟಡ ಕಾಮಗಾರಿಯು ಯಾವಾಗ ಪೂರ್ಣಗೊಳ್ಳುವುದು; ಈ ಕಾಮಗಾರಿಯು ಅನುದಾನದ ಕೊರತೆಯಿಂದ ಪೂರ್ಣಗೊಂಡಿಲ್ಲವೆಂದು ತಿಳಿದು ಬಂದಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ ಕಸಂವಾ 47 ಕೆಓಎಲ್ ಆಕ 2021, ದಿನಾಂಕ:02.12.2021ರಲ್ಲಿ ಕೊಂಕಣಿ ಸಾಹಿತ್ಯ ಅಕಾಡೆಮಿ ಕಟ್ಟಡ ಕಾಮಗಾರಿಗೆ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ರೂ.300.00 ಲಕ್ಷಗಳ ಅಂದಾಜು ಪಟ್ಟಿಗೆ ಸೀಮಿತಗೊಳಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br>**(ವಿವರವನ್ನು ಅನುಬಂಧ-1ರಲ್ಲಿರಿಸಿದೆ)**<br><br>ಪ್ರಸ್ತುತ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರು ಸಲ್ಲಿಸಿರುವ ಪ್ರಗತಿ ವರದಿಯಂತೆ, ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗ ಇವರು ನಿರ್ವಹಿಸುತ್ತಿದ್ದು, ಕಟ್ಟಡ ಕಾಮಗಾರಿಗಾಗಿ ಒಟ್ಟು ರೂ.269.54 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ ಎಂದು ತಿಳಿಸಿರುತ್ತಾರೆ. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವು ಸ್ಥಳ ಪರಿಶೀಲನೆ ಮಾಡಿರುವಂತೆ, ಕಟ್ಟಡದ ಪ್ಲಾಸ್ಟರಿಂಗ್ ಕಾರ್ಯ ಮುಗಿದಿದ್ದು, ವಿದ್ಯುತ್, ನೆಲಹಾಸು, ಪೇಂಟ್ ಹಾಗೂ ಇತರೆ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆಂದು ತಿಳಿಸಿರುತ್ತಾರೆ. |
| ಆ) | ಶಾಲೆಗಳಲ್ಲಿ ಕೊಂಕಣಿ ಭಾಷೆಯನ್ನು ಕಲಿಸಲು ಸರ್ಕಾರ ಕೈಗೊಂಡ ಕ್ರಮವೇನು; ಪಿಯುಸಿ ಹಂತದಲ್ಲಿ ಕೊಂಕಣಿ ಭಾಷೆಯನ್ನು ಕಲಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; (ವಿವರ ನೀಡುವುದು) | 2007-08ನೇ ಶೈಕ್ಷಣಿಕ ವರ್ಷದಿಂದ ಶಾಲೆಗಳಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಯಾವುದೇ ಒತ್ತಡವಿಲ್ಲದೇ ಸ್ವಇಚ್ಛೆಯಿಂದ ಕೊಂಕಣಿ ಭಾಷೆಯನ್ನು ಕಲಿಯುವ ವಿದ್ಯಾರ್ಥಿಗಳಿಗೆ ಮೂರನೇ ಭಾಷೆಯನ್ನಾಗಿ ಅಳವಡಿಸಲಾಗಿದೆ.<br>**(ವಿವರವನ್ನು ಅನುಬಂಧ-2ರಲ್ಲಿರಿಸಿದೆ)**<br><br>ಪ್ರಸ್ತುತ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಮಾತ್ರ ಕೊಂಕಣಿ ಭಾಷೆಯನ್ನು ಕಲಿಸಲಾಗುತ್ತಿದೆ. |
| ಇ) | ಕೊಂಕಣಿ ಸಾಹಿತ್ಯ ಅಕಾಡೆಮಿಯಿಂದ ಕಾರ್ಯ ಚಟುವಟಿಕೆಗಳಿಗೆ ನೀಡುವ ಅನುದಾನವನ್ನು ಪ್ರತಿ ವರ್ಷ ರೂ.3.00 ಕೋಟಿ ಏರಿಸಲು ಮುಂದಿನ ಬಜೆಟ್‌ಗಳಲ್ಲಿ ಘೋಷಿಸಲು ಕ್ರಮ ಕೈಗೊಳ್ಳುವುದೇ; | ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಗೆ 2023-24ನೇ ಸಾಲಿನಲ್ಲಿ ರೂ.50.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಹಾಗೂ 2024-25ನೇ ಸಾಲಿನಲ್ಲಿ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ವಾರ್ಷಿಕ ಅಗತ್ಯಗಳಿಗೆ ರೂ.58.00 ಲಕ್ಷಗಳ ಅನುದಾನವನ್ನು ಅವಕಾಶ ಮಾಡಿಕೊಳ್ಳಲಾಗಿದ್ದು, ಅದರಂತೆ ಅನುದಾನ ಬಿಡುಗಡೆ ಮಾಡಲು ಪರಿಶೀಲಿಸಲಾಗುವುದು. |

| | | |
|---|---|---|
| ಈ) | ಕೊಂಕಣಿ ಭಾಷೆಯ ಅಭಿವೃದ್ಧಿ ಮತ್ತು ಸಾಹಿತ್ಯಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರದ ಇಲಾಖೆಯ ಮುಂದಿರುವ ಯೋಜನೆಗಳಾವುವು; (ವಿವರ ನೀಡುವುದು) | 2024-25ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-352ರಲ್ಲಿ "ತುಳು, ಕೊಡವ, ಬ್ಯಾರಿ ಮತ್ತು ಕೊಂಕಣಿ ಕರ್ನಾಟಕದ ಪ್ರಾದೇಶಿಕ ಭಾಷೆಗಳಾಗಿದ್ದು, ಅವುಗಳ ಅಭಿವೃದ್ಧಿಗಾಗಿ ಅಕಾಡೆಮಿಗಳ ಮೂಲಕ ಭಾಷೆ, ಸಂಸ್ಕೃತಿ, ಸಾಹಿತ್ಯವನ್ನು ಪ್ರೋತ್ಸಾಹಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ. ಅದರಂತೆ, ಸರ್ಕಾರದ ಆದೇಶ ಸಂಖ್ಯೆ:ಕಸಂವಾ 211 ಕಸಧ 2024, ದಿನಾಂಕ:25.06.2024ರಲ್ಲಿ ಸರ್ಕಾರದ ತಾತ್ವಿಕ ಅನುಮೋದನೆ ನೀಡಿದೆ.<br>**(ವಿವರವನ್ನು ಅನುಬಂಧ-3ರಲ್ಲಿರಿಸಿದೆ)**<br><br>ಅಲ್ಲದೇ, ಅಕಾಡೆಮಿ ವತಿಯಿಂದ ಸಾಹಿತ್ಯ ಗೋಷ್ಠಿಗಳು, ಸಮ್ಮೇಳನಗಳು, ಕವಿಗೋಷ್ಠಿ ಕಾರ್ಯಗಾರಗಳು, ನಡೆಸುವುದು, ಪುಸ್ತಕಗಳ ಖರೀದಿ, ಸಾಹಿತಿ ಲೇಖಕರ ಪುಸ್ತಕಗಳನ್ನು ಅಕಾಡೆಮಿಯಿಂದ ಪ್ರಕಟಿಸುವುದು, ಅತ್ಯುನ್ನತ ಪುಸ್ತಕಗಳಿಗೆ ಬಹುಮಾನ, ಸಾಹಿತ್ಯ ಪ್ರಕಾರಗಳಲ್ಲಿ ಪ್ರಶಸ್ತಿ, ಫೆಲೋಶಿಫ್ ಯೋಜನೆ, ಅಧ್ಯಯನ, ಸಂಶೋಧನೆ ಕಾರ್ಯಗಳು ಕೊಂಕಣಿ ಮಾತೃಭಾಷೆಯಲ್ಲಿರುವ ಹಲವಾರು ಸಮುದಾಯಗಳ ಅದರಲ್ಲೂ ಹಿಂದುಳಿದ ವರ್ಗಗಳ ಸಂಸ್ಕೃತಿ ಜಾನಪದಗಳ ಬಗ್ಗೆ ಸಂಶೋಧನೆ ಮತ್ತು ದಾಖಲೀಕರಣ ಮುಂತಾದ ಯೋಜನೆಗಳನ್ನು ರೂಪಿಸಿಕೊಳ್ಳಲಾಗಿದೆ. |
| ಉ) | ಸಾಹಿತ್ಯ ಅಕಾಡೆಮಿಗಳ ಅಧ್ಯಕ್ಷರುಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಪ್ರವಾಸ ಕೈಗೊಳ್ಳುವ ಮತ್ತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸರ್ಕಾರಿ ವಾಹನದ ವ್ಯವಸ್ಥೆ ಮಾಡಲು ಇಲಾಖೆ ಕ್ರಮ ಕೈಗೊಳ್ಳಲಿದೆಯೇ; ಪ್ರಸ್ತುತ ವ್ಯವಸ್ಥೆಯೇನು? (ವಿವರ ನೀಡುವುದು) | ಸರ್ಕಾರದ ಅದೇಶ ಸಂಖ್ಯೆ : ಕಸಂವಾ 383 ಕಸಧ 2017, ದಿನಾಂಕ::26-03-2018ರ ಆದೇಶದನ್ವಯ ಎಲ್ಲಾ ಅಕಾಡೆಮಿಗಳ ಅಧ್ಯಕ್ಷರುಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಪ್ರವಾಸ ಕೈಗೊಳ್ಳಲು ಮತ್ತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಖಾಸಗಿ ವಾಹನ ವ್ಯವಸ್ಥೆ ಕಲ್ಪಿಸಲಾಗಿದೆ.<br>**(ವಿವರವನ್ನು ಅನುಬಂಧ-4ರಲ್ಲಿರಿಸಿದೆ)** |

ಸಂಖ್ಯೆ: ಕಸಂವಾ 37 ಕವಿಸ 2024

**(ಶಿವರಾಜ.ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

## ಕರ್ನಾಟಕ ಸರ್ಕಾರದ ನಡವಳಿಗಳು

ಅನುಬಂಧ-1

**ವಿಷಯ:** ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ಕಟ್ಟಡದ ಕಾಮಗಾರಿಗೆ ಸಂಬಂಧ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 110 ಕೆಓಎಲ್ ಆಕ 2019, ದಿ: 07.12.2019.
2. ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಕಗಪ್ರಅಪ್ರಾ/62/ಅನುದಾನ/2019-20, ದಿ:15.03.2021.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದ ಅನುಬಂಧದ ಕ್ರಮ ಸಂಖ್ಯೆ: 07ರಲ್ಲಿನ ಕೊಂಕಣಿ ಸಾಹಿತ್ಯ ಅಕಾಡೆಮಿ ಕಟ್ಟಡ ಕಾಮಗಾರಿಗೆ ರೂ.500.00ಲಕ್ಷಕ್ಕೆ ಮಂಜೂರಾತಿ ನೀಡಿ ಮೊದಲನೇ ಕಂತಾಗಿ ರೂ.300.00ಲಕ್ಷಗಳನ್ನು, ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ, ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರು ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ಕಟ್ಟಡದ ಅಂದಾಜು ಪಟ್ಟಿಗೆ ಲೋಕೋಪಯೋಗಿ ಇಲಾಖೆಯಿಂದ ರೂ.500/-ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿದ್ದು, ಪ್ರಾಧಿಕಾರಕ್ಕೆ ರೂ.500/-ಲಕ್ಷಗಳ ಮೊತ್ತಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡಲು ಪ್ರತ್ಯಾಯೋಜನೆ ಇರುವುದಿಲ್ಲ, ಹಾಗೂ 2021-22ನೇ ಸಾಲಿನಲ್ಲಿ ಪ್ರಾಧಿಕಾರಕ್ಕೆ ನಿರೀಕ್ಷಿತ ಮುಂದುವರೆದ ಕಾಮಗಾರಿಗಳಿಗೆ ಬೇಕಾದ ಕನಿಷ್ಠ ಅನುದಾನವನ್ನು ಸರ್ಕಾರ ಹಂಚಿಕೆ ಮಾಡಿಲ್ಲವಾದ ಕಾರಣ 2019-20ನೇ ಸಾಲಿನ ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ನಿರ್ಮಿಸಲು ಈಗಾಗಲೇ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಿರುವ ಮೊತ್ತ ರೂ.300/-ಲಕ್ಷಗಳಿಗೆ ಮಾತ್ರ ಅಂದಾಜು ಅನ್ನು ಸೀಮಿತಗೊಳಿಸಿ ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 47 ಕೆಓಎಲ್ ಆಕ 2021 ಬೆಂಗಳೂರು,**
**ದಿನಾಂಕ: 02.12.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ಕೊಂಕಣಿ ಭವನ ನಿರ್ಮಾಣಕ್ಕೆ ರೂ.300.00ಲಕ್ಷಗಳ ಅಂದಾಜು ಪಟ್ಟಿಗೆ ಸೀಮಿತಗೊಳಿಸಿ, ಈ ಕೆಳಕಂಡ ಷರತ್ತು/ನಿಬಂಧನೆಗಳಿಗೊಳಪಟ್ಟು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

**ಷರತ್ತು/ನಿಬಂಧನೆಗಳು:**

1. ಜಿಲ್ಲಾಧಿಕಾರಿ, ಮಂಗಳೂರು ರವರು 1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮವನ್ನು ಹಾಗೂ ಅದರ ನಿಯಮಗಳು 2000 ಅನ್ನು ಕಡ್ಡಾಯವಾಗಿ ಪಾಲಿಸುವುದು.
2. ಕೆ.ಟಿ.ಪಿ.ಪಿ. ಕಾಯ್ದೆ ಅನುಸಾರ ಟೆಂಡರ್ ಪ್ರಕ್ರಿಯೆ ಕೈಗೊಂಡು ಟೆಂಡರ್ ಪ್ರಕ್ರಿಯೆಯ ವಿವಿಧ ಹಂತಗಳ ಬಗ್ಗೆ, ಟೆಂಡರ್ ಪಡೆದ ಸಂಸ್ಥೆಯ ಹೆಸರು, ವಿವರ ಸೇರಿದಂತೆ ಕಾಮಗಾರಿಯ ಪ್ರಾರಂಭದಿಂದ ಕೊನೆಯವರೆಗಿನ ವಿವಿಧ ಹಂತದ ಪ್ರಗತಿ ವರದಿಯನ್ನು ಕಡ್ಡಾಯವಾಗಿ ಪ್ರತಿ ತಿಂಗಳು ಜಿಲ್ಲಾಧಿಕಾರಿ, ಮಂಗಳೂರು ಜಿಲ್ಲೆ ರವರು ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
3. ಜಿಲ್ಲಾಧಿಕಾರಿ, ಮಂಗಳೂರು ಜಿಲ್ಲೆರವರು ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು. ಸದರಿ ಕಾಮಗಾರಿಯ ಅನುಷ್ಠಾನಕ್ಕೆ ಬೇರೆ ಯಾವುದೇ ಸರ್ಕಾರಿ ಇಲಾಖೆಯ ಅನುದಾನದಿಂದ ಅಥವಾ ಖಾಸಗಿ ದೇಣಿಗೆಯಿಂದ ಪಡೆದಿರುವ ಅನುದಾನದಿಂದ ಪುನರಾವರ್ತನೆ ಆಗಿರುವುದಿಲ್ಲ ಎಂಬುದನ್ನು ಖಚಿತಪಡಿಸಿಕೊಂಡು ಪ್ರತಿ ಮೂರು ತಿಂಗಳಿಗೊಮ್ಮೆ Non-Duplication Certificate ಅನ್ನು ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

ಸಂಖ್ಯೆ: 575
ದಿನಾಂಕ: 6/12/21

Scanned with OKEN Scanner

4. ಕಾಮಗಾರಿಯ ಸ್ಥಳದಲ್ಲಿ ಶಾಶ್ವತವಾಗಿ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ (ರೂ.300.00ಲಕ್ಷ) ಧನಸಹಾಯದಲ್ಲಿ ನಿರ್ಮಿತ ಕಟ್ಟಡ ಎಂಬ ನಾಮಫಲಕವನ್ನು ಕಡ್ಡಾಯವಾಗಿ ಹಾಕತಕ್ಕದ್ದು.
5. ಕಾಮಗಾರಿಯ ಹಣಬಳಕೆ ಪ್ರಮಾಣ ಪತ್ರವನ್ನು ಹಂತ ಹಂತವಾಗಿ ಜಿಲ್ಲಾಧಿಕಾರಿ ಮಂಗಳೂರು ಜಿಲ್ಲೆ ರವರು ಪ್ರತಿ ಮೂರು ತಿಂಗಳಿಗೊಮ್ಮೆ ಕಳುಹಿಸತಕ್ಕದ್ದು. ಅದರ ಜೊತೆ ಜಿ.ಪಿ.ಎಸ್. ಛಾಯಾಚಿತ್ರಗಳು, ಭೌತಿಕ ಪ್ರಗತಿಯ ಮಾಹಿತಿ ಸಮೇತ ಜಿಲ್ಲಾಧಿಕಾರಿಗಳ ದೃಢೀಕರಣದೊಂದಿಗೆ ಸಲ್ಲಿಸತಕ್ಕದ್ದು.
6. ಜಿಲ್ಲಾಧಿಕಾರಿಗಳು, ಮಂಗಳೂರು ಜಿಲ್ಲೆರವರು, ಉಪ ವಿಭಾಗಾಧಿಕಾರಿಗಳಿಂತ ಕಡಿಮೆ ದರ್ಜೆ ಇಲ್ಲದ ಕನಿಷ್ಠ ಮೂರು ಅಧಿಕಾರಿಗಳ ತಂಡವನ್ನು ರಚಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ಪ್ರತಿ ಹಂತದಲ್ಲೂ ಪರಿವೀಕ್ಷಣೆ ಮಾಡಿಸಿ, ಕಾಮಗಾರಿಯ ಗುಣಮಟ್ಟ ಮತ್ತು ಅನುಷ್ಠಾನದ ಬಗ್ಗೆ ನಿಗಾವಹಿಸುವುದು. ಪ್ರತಿ ಮೂರು ತಿಂಗಳಿಗೊಮ್ಮೆ ಇಂತಹ ತಪಾಸಣಾ ವರದಿಯನ್ನು ಜಿಲ್ಲಾಧಿಕಾರಿಗಳು, ಮಂಗಳೂರು ಜಿಲ್ಲೆರವರು, ಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
7. ಕಾಮಗಾರಿಯ ಬಗ್ಗೆ ಆಡಿಟ್ ವರದಿಯನ್ನು ಜಿಲ್ಲಾಧಿಕಾರಿಗಳು, ಮಂಗಳೂರು ಜಿಲ್ಲೆರವರು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
8. ಕಾಮಗಾರಿಯನ್ನು ನಿರ್ದಿಷ್ಟ ಅವಧಿಯಲ್ಲಿ ಪೂರ್ಣಗೊಳಿಸುವುದು ಇಲ್ಲವಾದಲ್ಲಿ ಟೆಂಡರ್ ಪಡೆದ ಸಂಸ್ಥೆಯನ್ನು ನಿಯಮಾನುಸಾರ ಕಪ್ಪು ಪಟ್ಟಿಗೆ ಸೇರಿಸುವುದು.
9. ಅನುಷ್ಠಾನ ಇಲಾಖೆಯು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಪೂರ್ಣ ಜವಾಬ್ದಾರಿಯಾಗುವುದು.
10. ಜಿಲ್ಲಾಧಿಕಾರಿ, ಮಂಗಳೂರು ಜಿಲ್ಲೆರವರು, ಯಾವುದೇ ಕಾರಣಕ್ಕೂ ರೂ.300.00 ಲಕ್ಷಗಳಿಗಿಂತ ಹೆಚ್ಚುವರಿಯಾಗಿ ಅನುದಾನ ಬೇಡಿಕೆಯ ಪ್ರಸ್ತಾವನೆ ಸಲ್ಲಿಸುವಂತಿಲ್ಲ.
11. ಸದರಿ ಕಾಮಗಾರಿಯ ಅನುಮೋದಿತ ಅಂದಾಜು ಪತ್ರಿಕೆ, ಟೆಂಡರ್ ಡಾಕ್ಯುಮೆಂಟ್, ಟೆಂಡರ್ ಆದೇಶ, ನೀಲಿನಕ್ಷೆ, ಉಪ ವಿಭಾಗಾಧಿಕಾರಿಗಳಿಂತ ಕಡಿಮೆ ದರ್ಜೆ ಇಲ್ಲದ ಕನಿಷ್ಠ ಮೂರು ಅಧಿಕಾರಿಗಳ ತಂಡದ ಪ್ರತಿ ತಿಂಗಳ ತಪಾಸಣಾ ವರದಿ, ಆರ್ಥಿಕ ಮತ್ತು ಭೌತಿಕ ಪ್ರಗತಿಯ ವಿವರಗಳು ತಿಂಗಳುವಾರು, ಕಾಮಗಾರಿಯ ಛಾಯಾಚಿತ್ರಗಳು - ಈ ಎಲ್ಲಾ ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಕಡ್ಡಾಯವಾಗಿ ಮಂಗಳೂರು ಜಿಲ್ಲಾಧಿಕಾರಿಯವರ ಅಧಿಕೃತ ಜಾಲತಾಣದಲ್ಲಿ ಕಡ್ಡಾಯವಾಗಿ ಪ್ರತಿ ಹಂತದಲ್ಲೂ ಸಹ ಅಳವಡಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:30.09.2021ರನ್ವಯ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ವೆಂಕಟೇಶಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ).

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), (ಇ&ಎಸ್‌ಎಸ್‌ಎ), (ಎ&ಇ) ಕರ್ನಾಟಕ, ಬೆಂಗಳೂರು-560001.
2. ಜಿಲ್ಲಾಧಿಕಾರಿ, ಮಂಗಳೂರು, ಮಂಗಳೂರು ಜಿಲ್ಲೆ – ಮುಂದಿನ ಅಗತ್ಯ ಕ್ರಮಕ್ಕಾಗಿ.
3. ಕಾರ್ಯದರ್ಶಿ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.

---- 3

Scanned with OKEN Scanner

4. ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7 ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಅನುಬಂಧ -೨

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 6ನೇ ತರಗತಿಯಿಂದ ಕೊಂಕಣಿ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಳವಡಿಸುವ ಬಗ್ಗೆ.

ಓದಲಾಗಿದೆ:- 1) ನಿರ್ದೇಶಕರು, ಪಠ್ಯಪುಸ್ತಕ ನಿರ್ದೇಶನಾಲಯ, ಬೆಂಗಳೂರು, ರವರ ದಿನಾಂಕ:21-10-2005ರ ಪತ್ರ ಸಂಖ್ಯೆ:ಪಪೂನಿ/ಕೊಂಕಣಿ ತೃಭಾಪವ1/2005-06.

2) ದಿನಾಂಕ:03-03-2006ರ ಆದೇಶ ಸಂಖ್ಯೆ:ಇಡಿ 207 ಡಿಜಿಓ 2004.

3) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಅವರ ದಿನಾಂಕ:18-02-2006ರ ಪತ್ರ ಸಂಖ್ಯೆ:ಪಠ್ಯಪುಸ್ತಕ ಕೊಂಕಣಿ ಭಾಷೆ/2006-07.

* * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:21-10-2006ರ ಪತ್ರದಲ್ಲಿ ಪಠ್ಯಪುಸ್ತಕ ನಿರ್ದೇಶನಾಲಯದ ನಿರ್ದೇಶಕರು, ಕೊಂಕಣಿ ಭಾಷೆಯನ್ನು ಮೂರನೇ ಐಚ್ಛಿಕ ಭಾಷೆ ಅಂದರೆ ತೃತೀಯ ಭಾಷೆಯನ್ನಾಗಿ 6 ರಿಂದ 10ನೇ ತರಗತಿಯವರೆಗೆ ಶಾಲಾ ಪಠ್ಯಕ್ರಮದಲ್ಲಿ ಸೇರಿಸಲು ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ 10 ಜನ ಸದಸ್ಯರ ಸಮಿತಿ ಪಠ್ಯವಸ್ತುವನ್ನು ರಚಿಸಿದೆ. ಕೊಂಕಣಿ ತೃತೀಯ ಭಾಷೆಯ ಪಠ್ಯವಸ್ತುವನ್ನು ಕನ್ನಡ ಲಿಪಿ ಬಳಸಿ ತಯಾರಿಸಿರುತ್ತಾರೆ. ಸದರಿ ಸಮಿತಿಯು ಕರ್ನಾಟಕದಲ್ಲಿ ರಾಜ್ಯ ಭಾಷೆ ಮತ್ತು ಆಡಳಿತ ಭಾಷೆಯಾಗಿರುವುದರಿಂದ ಈ ಭಾಷೆಯ ಲಿಪಿಯನ್ನೇ ಬಳಸಿ, ಪಠ್ಯಪುಸ್ತಕ ರಚಿಸಿ ಓದಿಸಲು ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಇದನ್ನು ಪರಿಶೀಲಿಸಿ ಅನುಮೋದಿಸುವಂತೆ ಕೋರಿದ್ದಾರೆ.

ಕರ್ನಾಟಕ ರಾಜ್ಯದ ಶಿಕ್ಷಣ ಪದ್ಧತಿಯಲ್ಲಿ ತ್ರಿಭಾಷಾ ಸೂತ್ರವನ್ನು ಅನುಸರಿಸಲಾಗುತ್ತಿದೆ. ಇದರಂತೆ 1ನೇ ಹಾಗೂ 2ನೇ ತರಗತಿಗಳಲ್ಲಿ ಪ್ರತಿಯೊಂದು ಮಗುವೂ ಕನ್ನಡ, ತಮಿಳು, ತೆಲುಗು, ಹಿಂದಿ, ಮರಾಠಿ, ಉರ್ದು ಮತ್ತು ಇಂಗ್ಲೀಷ್ ಭಾಷೆಗಳಲ್ಲಿ ಯಾವುದಾದರೂ ಒಂದು ಭಾಷೆಯನ್ನು ಅಧ್ಯಯನ ಮಾಡಬೇಕು. ಭಾಷಾ ಅಲ್ಪಸಂಖ್ಯಾತ ಮಾಧ್ಯಮ ಶಾಲೆಗಳಲ್ಲಿ 1ನೇ ಹಾಗೂ 2ನೇ ತರಗತಿಗಳಲ್ಲಿ ಕನ್ನಡವನ್ನು ಅಧ್ಯಯನ ಮಾಡದೇ ಇರುವ ಮಗುವು 3ನೇ ಹಾಗೂ 4ನೇ ತರಗತಿಗಳಲ್ಲಿ ಕನ್ನಡವನ್ನು ಕಡ್ಡಾಯ ವಿಷಯವನ್ನಾಗಿ ಅಧ್ಯಯನ ಮಾಡಬೇಕು. ಪ್ರಾಥಮಿಕ ಒಂದನೇ ತರಗತಿಯಿಂದ ಇಂಗ್ಲೀಷನ್ನು ದ್ವಿತೀಯ ಭಾಷೆಯನ್ನಾಗಿ ಪರಿಚಯಿಸಲಾಗುತ್ತಿದೆ. ಆಂಗ್ಲ ಮಾಧ್ಯಮ ರಾಜ್ಯ ಪಠ್ಯ ಕ್ರಮದ ಶಾಲೆಗಳಲ್ಲಿ ಕನ್ನಡವನ್ನು ಒಂದನೇ ತರಗತಿಯಿಂದ ದ್ವಿತೀಯ ಭಾಷೆಯನ್ನಾಗಿ ಪರಿಚಯಿಸಲಾಗುತ್ತಿದೆ.

ಈ ಹಿಂದೆ 5ನೇ ತರಗತಿಯಿಂದಲೇ ತೃತೀಯ ಭಾಷೆಯನ್ನು ಅಧ್ಯಯನ ಮಾಡಬೇಕಾಗಿತ್ತು. ಆದರೆ 5ನೇ ತರಗತಿಯನ್ನು ಕಿರಿಯ ಪ್ರಾಥಮಿಕ ಶಾಲಾ ಹಂತಕ್ಕೆ ಸೇರ್ಪಡಿಸಿರುವುದರಿಂದ, ಮಕ್ಕಳು 6ನೇ ತರಗತಿಯಿಂದ ತೃತೀಯ ಭಾಷೆಯನ್ನು ಅಧ್ಯಯನ ಮಾಡಬೇಕಾಗಿರುತ್ತದೆ. 6ನೇ ತರಗತಿಯಿಂದ ಕನ್ನಡ, ತಮಿಳು, ತೆಲುಗು, ಸಂಸ್ಕೃತ, ಹಿಂದಿ, ಮರಾಠಿ, ಉರ್ದು, ಇಂಗ್ಲೀಷ್ ಮತ್ತು ಅರೇಬಿಕ್ ಭಾಷೆಗಳಲ್ಲಿ ಯಾವುದಾದರೂ ಒಂದು ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಅಧ್ಯಯನ ಮಾಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. 6ನೇ ತರಗತಿಯಲ್ಲಿ ಮಗುವು ಒಂದು ವಾರದಲ್ಲಿ 40 ನಿಮಿಷಗಳ 7 ಅವಧಿಗಳಲ್ಲಿ (ಪೀರಿಯಡ್ಸ್) ಪ್ರಥಮ ಭಾಷೆಯನ್ನು 5 ಅವಧಿಗಳಲ್ಲಿ ದ್ವಿತೀಯ ಭಾಷೆಯನ್ನು ಹಾಗೂ 4 ಅವಧಿಗಳಲ್ಲಿ ತೃತೀಯ ಭಾಷೆಯನ್ನು ಅಧ್ಯಯನ ಮಾಡುತ್ತದೆ.

SO SL

ಈಗ 6ನೇ ತರಗತಿಯಿಂದ 10ನೇ ತರಗತಿಗಳವರೆಗೆ ಕೊಂಕಣಿ ಭಾಷೆಯನ್ನು ಸಹ ತೃತೀಯ ಭಾಷೆಯನ್ನಾಗಿ ಅಳವಡಿಸುವ ಪ್ರಸ್ತಾವನೆ ಬಂದಿರುತ್ತದೆ. ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಕೊಂಕಣಿ ಭಾಷೆಯನ್ನಾಡುವ ಜನಸಂಖ್ಯೆ ಸಾಕಷ್ಟು ಪ್ರಮಾಣದಲ್ಲಿದೆ. ಮಕ್ಕಳು 1ನೇ ಹಾಗೂ 2ನೇ ತರಗತಿಗಳಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಧ್ಯಯನ ಮಾಡಿರುವುದರಿಂದ ತೃತೀಯ ಭಾಷೆ ಕೊಂಕಣಿಯನ್ನು ಕನ್ನಡ ಲಿಪಿಯಲ್ಲಿ ಅಭ್ಯಸಿಸಲು ಸುಲಭವಾಗಿರುತ್ತದೆ. ಆದ್ದರಿಂದ ಕೊಂಕಣಿ ಭಾಷೆಯನ್ನು ಕನ್ನಡ ಲಿಪಿಯಲ್ಲಿ ನೀಡಲು ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿಯವರು ಬೇಡಿಕೆ ಸಲ್ಲಿಸಿರುತ್ತಾರೆ. ಸದರಿ ಅಕಾಡೆಮಿಯವರು ನಡೆಸಿರುವ ಸರ್ವೇಕ್ಷಣೆಯ ಪ್ರಕಾರ 102 ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 665 ವಿದ್ಯಾರ್ಥಿಗಳು ಕೊಂಕಣಿಯನ್ನು ತೃತೀಯ ಭಾಷೆಯನ್ನಾಗಿ ಅಭ್ಯಸಿಸಲು ಇಚ್ಛಿಸಿರುತ್ತಾರೆ. ಮಂಗಳೂರಿನ ಸೇಂಟ್ ಅಲೋಷಿಯಸ್ ಕಾಲೇಜಿನವರು ಈಗಾಗಲೇ ಪದವಿ ತರಗತಿಗಳಲ್ಲಿ ಕನ್ನಡ ಲಿಪಿಯ ಮೂಲಕ ಕೊಂಕಣಿಯನ್ನು ಐಚ್ಛಿಕ ವಿಷಯವನ್ನಾಗಿ ಕಲಿಸುತ್ತಿದ್ದಾರೆ. ಇದೇ ಕಾಲೇಜಿನವರು ಕೊಂಕಣಿಯಲ್ಲಿ ಸ್ನಾತಕೋತ್ತರ ಡಿಪ್ಲೋಮೋ ತರಗತಿಗಳನ್ನು ನಡೆಸುತ್ತಿದ್ದಾರೆ.

ಕ್ರಮ ಸಂಖ್ಯೆ (2)ರಲ್ಲಿನ ದಿನಾಂಕ:03-03-2006ರ ಆದೇಶದಲ್ಲಿ ರಾಜ್ಯ ಮಂಡಳಿಯ ಪಠ್ಯ ಕ್ರಮವನ್ನು ಅನುಸರಿಸುತ್ತಿರುವ ಶಾಲೆಗಳಲ್ಲಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಕೊಂಕಣಿ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಪರಿಚಯಿಸುವ ಬಗ್ಗೆ ಪರಿಶೀಲಿಸಲು ನಿರ್ದೇಶಕರು, ಉರ್ದು ಮತ್ತು ಅಲ್ಪಸಂಖ್ಯಾತ ಭಾಷಾ ನಿರ್ದೇಶನಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಅಧ್ಯಕ್ಷತೆಯಲ್ಲಿ ಕಾರ್ಯಪಡೆಯೊಂದನ್ನು ರಚಿಸಲಾಯಿತು. ಕಾರ್ಯಪಡೆಯು ಸರ್ಕಾರಕ್ಕೆ ಒಂದು ವರದಿಯನ್ನು ಸಲ್ಲಿಸಿದ್ದು, ಈ ಕೆಳಕಾಣಿಸಿದ ಶಿಫಾರಸ್ಸುಗಳನ್ನು ಮಾಡಿರುತ್ತದೆ.

1) ಕೊಂಕಣಿ ಭಾಷೆಯನ್ನು ತೃತೀಯ ಭಾಷೆಯನ್ನಾಗಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಅಳವಡಿಸಿದಲ್ಲಿ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ ಸುಮಾರು 400 ಶಾಲೆಗಳ ಅಂದಾಜು 5000 ಮಕ್ಕಳು ಕೊಂಕಣಿ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಕಲಿಯಲು ಇಚ್ಛಿಸಿರುತ್ತಾರೆ.
2) ಪಠ್ಯಪುಸ್ತಕ ನಿರ್ದೇಶನಾಲಯವು ಸಾದರಪಡಿಸಿದ ಪಠ್ಯ ಕ್ರಮವನ್ನು ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ಅನುಮೋದಿಸಲು ಕಾರ್ಯಪಡೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ.
3) ಪ್ರಸ್ತುತ ಕರ್ನಾಟಕದಲ್ಲಿ ಕೊಂಕಣಿಯು ಕನ್ನಡ ಹಾಗೂ ದೇವನಾಗರಿ ಲಿಪಿಯಲ್ಲಿ ಲಭ್ಯವಿದ್ದು, ಕರ್ನಾಟಕ ರಾಜ್ಯ ಭಾಷೆ ಕನ್ನಡವಾದ್ದರಿಂದ ಕೊಂಕಣಿ ಭಾಷೆಯನ್ನು ತೃತೀಯ ಭಾಷೆಯನ್ನಾಗಿ ಬೋಧಿಸಲು ಕನ್ನಡ ಲಿಪಿಯಲ್ಲಿ ಬಳಸಬಹುದೆಂದು ಹಾಗು ದೇವನಾಗರಿ ಲಿಪಿಯನ್ನು ಬಯಸುವವರಿಗೆ ಈ ಲಿಪಿಯನ್ನು ಬಳಸಲು ಸಹ ಅನುಮತಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.
4) ಕರಾವಳಿ ಕರ್ನಾಟಕದ ಶಾಲೆಗಳಲ್ಲಿ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಕೊಂಕಣಿ ಭಾಷೆ ಬಲ್ಲವರಾಗಿದ್ದು, ಸರ್ಕಾರಕ್ಕೆ ಹೆಚ್ಚಿನ ವೆಚ್ಚವಾಗದಂತೆ, ಅಲ್ಲಿನ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರು ಕೊಂಕಣಿ ಭಾಷೆಯನ್ನು ಬೋಧಿಸಲು ಅನುಮತಿ ನೀಡಲು ಶಿಫಾರಸ್ಸು ಮಾಡಲಾಗಿದೆ.
5) ಸಂವಿಧಾನದಲ್ಲಿ ಅನುಚ್ಛೇದದಲ್ಲಿನ ಭಾಷೆಯನ್ನು ತೃತೀಯ ಭಾಷೆಯಾಗಿ ಬೋಧಿಸಲು ಅವಕಾಶವಿದ್ದು, ಕೊಂಕಣಿ ಭಾಷೆಯು ಸಂವಿಧಾನದಲ್ಲಿ 8ನೇ

ಅನುಚ್ಛೇದದಲ್ಲಿ ಸೇರಿರುವುದರಿಂದ ತೃತೀಯ ಭಾಷೆಯಾಗಿ ಯಾವುದೇ ಒತ್ತಡವಿಲ್ಲದೆ ಸ್ವಂತ ಇಚ್ಛೆಯಿಂದ ಕೊಂಕಣಿ ಭಾಷೆಯನ್ನು ಕಲಿಯಲು ಮುಂದೆ ಬರುವ ವಿದ್ಯಾರ್ಥಿಗಳಿಗೆ ಮಾತ್ರ ತೃತೀಯ ಭಾಷೆ ಕೊಂಕಣಿಯನ್ನು ಕಲಿಯಲು ಅವಕಾಶ ಮಾಡಿಕೊಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ ಹಾಗೂ ನಮ್ಮ ರಾಜ್ಯ ತ್ರಿಭಾಷೆ ಸೂತ್ರವಾಗಿ ಹಾಗೂ ಭಾಷೆ ನೀತಿಗೆ ಯಾವುದೇ ಅಡ್ಡಿಕಡೆ ಆಗಬಾರದೆಂದು, ಕಾರ್ಯಪಡೆಯು ಅಭಿಪ್ರಾಯ ಪಟ್ಟಿರುತ್ತದೆ.

ಕ್ರಮ ಸಂಖ್ಯೆ (3)ರ ದಿನಾಂಕ:18–12–2006ರ ಪತ್ರದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ಕಾರ್ಯಪಡೆಯ ಅಭಿಪ್ರಾಯ ಸೂಕ್ತವಾಗಿದ್ದು ಇದನ್ನು ಯಥಾವತ್ತಾಗಿ ಅಂಗೀಕರಿಸಬಹುದೆಂದು ಅಭಿಪ್ರಾಯಪಟ್ಟಿರುತ್ತಾರೆ. ಇದನ್ನು ಒಪ್ಪಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಇಡಿ 207 ಡಿಜಿಇ 2004, ಬೆಂಗಳೂರು, ದಿನಾಂಕ:13–03–2007.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಲಿಪಿಯಲ್ಲಿ ಮತ್ತು ಇದರ ಜೊತೆಗೆ ದೇವನಾಗರಿ ಲಿಪಿಯನ್ನು ಬಯಸುವವರಿಗೆ ದೇವನಾಗರಿ ಲಿಪಿಯಲ್ಲಿ ಯಾವುದೇ ಒತ್ತಡವಿಲ್ಲದೆ ಸ್ವಂತ ಇಚ್ಛೆಯಲ್ಲಿ ಕೊಂಕಣಿ ಭಾಷೆಯನ್ನು ಕಲಿಯಲು ಮುಂದೆ ಬರುವ ವಿದ್ಯಾರ್ಥಿಗಳಿಗೆ ಕೊಂಕಣಿ ಭಾಷೆಯನ್ನು ತೃತೀಯ ಭಾಷೆಯಾಗಿ 2007–08ನೇ ಶೈಕ್ಷಣಿಕ ವರ್ಷದಿಂದ ಅಳವಡಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸ್ವರ್ಣಲತ ಎಂ. ಭಂಡಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ, ಸೇವೆಗಳು (1–2).

ಗೆ ವರಿಗೆ:–

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು 500 (ಐನೂರು) ಪ್ರತಿಗಳನ್ನು ಶಿಕ್ಷಣ ಇಲಾಖೆ, ಸೇವೆಗಳು–2 ಶಾಖೆಗೆ ಪೂರೈಸಲು ಕೋರಿದೆ.

<u>ಪ್ರತಿಗಳು:</u>

1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು–1.
2) ನಿರ್ದೇಶಕರು, ಪಠ್ಯಪುಸ್ತಕ ನಿರ್ದೇಶನಾಲಯ, ನಂ.4, 100 ಅಡಿ ರಿಂಗ್ ರಸ್ತೆ, ಹೊಸಕೆರೆ ಹಳ್ಳಿ, ಬೆಂಗಳೂರು–560 085..
3) ಅಧ್ಯಕ್ಷರು, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ, ಮಂಗಳೂರು–3.
4) ಸಚಿವ ಸಂಪುಟ ಶಾಖೆ (ಉಲ್ಲೇಖ: ಟಿಪ್ಪಣಿ ಸಂಖ್ಯೆ:ಸಿ 91:2007)
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಅನುಬಂಧ-3 ೮

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-352ರಲ್ಲಿ ತುಳು, ಕೊಡವ, ಬ್ಯಾರಿ ಮತ್ತು ಕೊಂಕಣಿ ಕರ್ನಾಟಕದ ಪ್ರಾದೇಶಿಕ ಭಾಷೆಗಳಾಗಿದ್ದು, ಅವುಗಳ ಅಭಿವೃದ್ಧಿಗಾಗಿ ಅಕಾಡೆಮಿಗಳ ಮೂಲಕ ಭಾಷೆ, ಸಂಸ್ಕೃತಿ, ಸಾಹಿತ್ಯವನ್ನು ಪ್ರೋತ್ಸಾಹಿಸುವ ಬಗ್ಗೆ.

ಓದಲಾಗಿದೆ: ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 10 ವೆಚ್ಚ-7/ 2024, ದಿನಾಂಕ:15-04-2024.

*****

**ಪ್ರಸ್ತಾವನೆ:-**

2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-352ರಲ್ಲಿ "ತುಳು, ಕೊಡವ, ಬ್ಯಾರಿ ಮತ್ತು ಕೊಂಕಣಿ ಕರ್ನಾಟಕದ ಪ್ರಾದೇಶಿಕ ಭಾಷೆಗಳಾಗಿದ್ದು, ಅವುಗಳ ಅಭಿವೃದ್ಧಿಗಾಗಿ ಅಕಾಡೆಮಿಗಳ ಮೂಲಕ ಭಾಷೆ, ಸಂಸ್ಕೃತಿ, ಸಾಹಿತ್ಯವನ್ನು ಪ್ರೋತ್ಸಾಹಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಮೇಲೆ ಓದಲಾದ ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ 2024-25ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಕಾರ್ಯಕ್ರಮಗಳಿಗಾಗಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಕ್ರಿಯಾಯೋಜನೆಯನ್ನು ರೂಪಿಸಿಕೊಳ್ಳುವಂತೆ ತಿಳಿಸಲಾಗಿರುತ್ತದೆ.

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 211 ಕಸಧ 2024**
**ಬೆಂಗಳೂರು, ದಿನಾಂಕ:25-06-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ ಕಂಡಿಕೆ.352 ತುಳು, ಕೊಡವ, ಬ್ಯಾರಿ ಮತ್ತು ಕೊಂಕಣಿ ಕರ್ನಾಟಕದ ಪ್ರಾದೇಶಿಕ ಭಾಷೆಗಳಾಗಿದ್ದು, ಅವುಗಳ ಅಭಿವೃದ್ಧಿಗಾಗಿ ಅಕಾಡೆಮಿಗಳ ಮೂಲಕ ಭಾಷೆ, ಸಂಸ್ಕೃತಿ, ಸಾಹಿತ್ಯವನ್ನು ಪ್ರೋತ್ಸಾಹಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸೂಕ್ತ ಕ್ರಿಯಾ ಯೋಜನೆ ಸಿದ್ಧಪಡಿಸಿ ಸಲ್ಲಿಸಲು ಹಾಗೂ ಸರ್ಕಾರದ ತಾತ್ವಿಕ ಅನುಮೋದನೆ ನೀಡಿದೆ.

**ಷರತ್ತುಗಳು:**

1. ಯೋಜನೆಯನ್ನು ಅನುಷ್ಠಾನಗೊಳಿಸಲು ಸಮಗ್ರ ಯೋಜನಾ ವರದಿಯ ಮತ್ತು ಸೂಕ್ತ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸಲ್ಲಿಸತಕ್ಕದ್ದು.
2. 2024-25ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸದರಿ ಆಯವ್ಯಯ ಘೋಷಣೆಗಾಗಿ ಅನುದಾನ ನಿಗದಿಪಡಿಸಿಕೊಳ್ಳತಕ್ಕದ್ದು.
3. ಯೋಜನೆಗೆ ತಗುಲುವ ವೆಚ್ಚವನ್ನು 2024-25ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2205-00-102-4-13 ರಾಜ್ಯ ಅಕಾಡೆಮಿಗಳಿಗೆ ಸಹಾಯ 103 ಸಹಾಯಾನುದಾನ-ಸಾಮಾನ್ಯರಡಿ ಒದಗಿಸಿರುವ ಅನುದಾನದ ಮಿತಿಯಲ್ಲಿ ರೂಪುರೇಷಗಳನ್ನು ಸಿದ್ಧಪಡಿಸಿ ಸಲ್ಲಿಸುವುದು.

..2...

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್-ಎಂಇಡಿ/22/2024, ದಿನಾಂಕ:14/05/2024ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 540 ವೆಚ್ಚ-7/2024, ದಿನಾಂಕ: 22.05.2024 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Geetha 25/6/2024
(ಎಸ್.ಗೀತಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ( ಸಂಸ್ಕೃತಿ)

ಇವರಿಗೆ:-

1. ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಜಂಟಿ ನಿರ್ದೇಶಕರು, ಮಾನವ ಅಭಿವೃದ್ಧಿ ವಿಭಾಗ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-7) ವಿಧಾನಸೌಧ, , ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
7. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಅನುಬಂಧ - 4

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ರಾಜ್ಯದ ವಿವಿಧ ಅಕಾಡೆಮಿಗಳ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ನೀಡುತ್ತಿರುವ ಸಭಾ ಭತ್ಯೆ ಮತ್ತು ಅಧ್ಯಕ್ಷರುಗಳಿಗೆ ನೀಡುತ್ತಿರುವ ಸ್ಥಳೀಯ ವಾಹನ ವೆಚ್ಚ ಮತ್ತು ಮಾಸಿಕ ಗೌರವಧನ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಕಸಂವಾಪ್ರ 1312 ಕಸಧ 2012/2011, ದಿನಾಂಕ:26-03-2012.
2. ಅಧ್ಯಕ್ಷರು, ಕರ್ನಾಟಕ ನಾಟಕ ಅಕಾಡೆಮಿ ಇವರ ಪತ್ರ ಸಂಖ್ಯೆ:ಕನಾಅ/2017-18/431, ದಿನಾಂಕ:21-11-2017 ಮತ್ತು ಪತ್ರ ಸಂಖ್ಯೆ:ಕನಾಅ/2017-18/731, ದಿನಾಂಕ:24-03-2018.
3. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ:ಡಿಕೆಸಿ/32012/38/2017, ದಿನಾಂಕ:06-12-2017 ಮತ್ತು ಪತ್ರ ಸಂಖ್ಯೆ:ಡಿಕೆಸಿ/32012/37/2017-18 ದಿನಾಂಕ:23-03-2018.

11029
26/3/18

****

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಆದೇಶದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ರಾಜ್ಯದ ವಿವಿಧ ಅಕಾಡೆಮಿಗಳ ಅಧ್ಯಕ್ಷರಿಗೆ ವಾಹನ ವೆಚ್ಚ ಹಾಗೂ ಮಾಸಿಕ ಗೌರವಧನವನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ಆದೇಶ ಹೊರಡಿಸಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ಅಧ್ಯಕ್ಷರು, ಕರ್ನಾಟಕ ನಾಟಕ ಅಕಾಡೆಮಿ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ಅಕಾಡೆಮಿಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಬೇಡಿಕೆಗಳನ್ನು ಪರಿಗಣಿಸಿ ಸರ್ಕಾರದ ಹಂತದಲ್ಲಿ ಸೂಕ್ತ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ.

1) ಅಕಾಡೆಮಿ ಸದಸ್ಯರಿಗೆ ಈಗ ನೀಡುತ್ತಿರುವ ಸಭಾಭತ್ಯೆ ರೂ.500/- ಗಳನ್ನು ರೂ.1,000/- ಗಳಿಗೆ ಹೆಚ್ಚಿಸುವುದು.

2) ಈಗಿರುವ ಅಂಗರಚನೆಯಂತೆ, ಅಕಾಡೆಮಿ ಅಧ್ಯಕ್ಷರಿಗೆ ವಾಹನ ಸೌಲಭ್ಯ ಕಲ್ಪಿಸಲಾಗಿಲ್ಲ. ಹೀಗಾಗಿ ಕಾರ್ಯಕ್ರಮಗಳಿಗಾಗಿ ನಡೆಸುವ ಓಡಾಟ ಶ್ರಮದಾಯಿಕವಾಗಿದೆ. ಈ ಕಾರಣದಿಂದ ಅಧ್ಯಕ್ಷರಿಗೆ ವಾಹನ ಸೌಲಭ್ಯವನ್ನು ಕಲ್ಪಿಸಲು, ಈಗಿರುವ ಸರ್ಕಾರಿ ಆದೇಶದಂತೆ, ಮಾಸಿಕ ಹೊರಗುತ್ತಿಗೆ ಆಧಾರದ ಮೇಲೆ ವಾಹನವನ್ನು ನೇಮಿಸಿಕೊಳ್ಳಲು ಅವಕಾಶ ನೀಡುವುದು ಮತ್ತು ಕಾರ್ಯಕ್ರಮಗಳನ್ನು ರೂಪಿಸುವ ಸಂದರ್ಭದಲ್ಲಿ ಅದೇ ವಾಹನವನ್ನು ಪರ ಊರಿಗೂ ಪ್ರಯಾಣಿಸಲು ಅನುಮತಿಸುವುದು.

27 MAR 2018

2/...

3) ಈಗಿರುವ ಅಂಗರಚನೆಯಂತೆ, ಜರೂರು ಸಂದರ್ಭದಲ್ಲಿ ರಿಜಿಸ್ಟ್ರಾರ್/ ಲೆಕ್ಕಪತ್ರಾಧಿಕಾರಿ ಯಾರಾದರೂ ಒಬ್ಬರ ಸಹಿಯಲ್ಲಿ ಡ್ರಾ ಮಾಡಬಹುದಾದ ಮೊತ್ತ ರೂ.1,000/- ಗಳಿದೆ. ಅದನ್ನು ರೂ.10,000/- ಗಳಿಗೆ ಹೆಚ್ಚಿಸುವುದು.

4) ಈಗಿರುವ ಅಂಗರಚನೆಯಂತೆ, ಅಧ್ಯಕ್ಷರು ತಮ್ಮ ವಿವೇಚನೆ ಮೇರೆಗೆ ಪ್ರತಿವರ್ಷ ರೂ.20,000/- ಗಳನ್ನು ವೆಚ್ಚ ಮಾಡಬಹುದು. ಅದನ್ನು ಸ್ಥಾಯಿಸಮಿತಿಯಲ್ಲಿ ಘಟನೋತ್ತರ ವಿವರಗಳನ್ನು ನೀಡಲಾಗುತ್ತಿತ್ತು. ಈ ಕಾಲಮಾನಕ್ಕೆ ತಕ್ಕಂತೆ, ಈ ಮೊತ್ತವನ್ನು ರೂ.1,00,000/- ಗಳಿಗೆ ಹೆಚ್ಚಿಸುವುದು.

5) ಈಗಿರುವ ಅಂಗರಚನೆಯಂತೆ, ಅಧ್ಯಕ್ಷರ ಗೌರವ ಸಂಭಾವನೆಯನ್ನು ರೂ.20,000/- ಗಳಿಗೆ ನಿಗದಿಪಡಿಸಲಾಗಿತ್ತು. ಈಗ ಈ ಮೊತ್ತವನ್ನು ಹೆಚ್ಚಿಸಿ, ಅಧ್ಯಕ್ಷರ ಗೌರವ ಸಂಭಾವನೆಯನ್ನು ಮಾಸಿಕ ರೂ.30,000/- ಗಳಿಗೆ ನಿಗದಿಪಡಿಸುವುದು.

ಮೇಲೆ ಓದಲಾದ (3) ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಸದರಿ ಅಕಾಡೆಮಿಗಳ ಅಂಗರಚನೆಯ ನಿಯಮಾವಳಿಯನ್ನು ಮಾರ್ಪಡಿಸಿದಲ್ಲಿ ವಾರ್ಷಿಕವಾಗಿ ಸರ್ಕಾರಕ್ಕೆ ಉಂಟಾಗುವ ವೆಚ್ಚದ ವಿವರಗಳನ್ನು ಒದಗಿಸಿದ್ದು, ಈ ಬಗ್ಗೆ ಸರ್ಕಾರದ ಹಂತದಲ್ಲಿ ನಿರ್ಣಯಿಸಿ ಸೂಕ್ತ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ. ಅದರಂತೆ ಸದರಿ ಅಂಗರಚನೆಯ ನಿಯಮಾವಳಿಗಳನ್ನು ಕ್ರೋಡೀಕರಿಸಿ ಸರ್ಕಾರದ ಆದೇಶ ಹೊರಡಿಸಲು ಉದ್ದೇಶಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 383 ಕಸಧ 2017,</u>
<u>ಬೆಂಗಳೂರು, ದಿನಾಂಕ:26-03-2018</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯವ್ಯಾಪ್ತಿಯಡಿಯಲ್ಲಿ ಬರುವ ವಿವಿಧ ಅಕಾಡೆಮಿಗಳ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ರಿಜಿಸ್ಟ್ರಾರ್‌ಗಳಿಗೆ ಸಂಬಂಧಿಸಿದಂತೆ ಇರುವ ಅಧಿಕಾರ ಮತ್ತು ಕಾರ್ಯಹಂಚಿಕೆ ಹಾಗೂ ಸೌಲಭ್ಯಗಳನ್ನು ಈ ಕೆಳಕಂಡಂತೆ ಪರಿಷ್ಕರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶ ಹೊರಡಿಸಿದೆ.

| ಕ್ರಸಂ. | ಪ್ರಸ್ತುತ ಇರುವ ಸೌಲಭ್ಯ | ಪರಿಷ್ಕರಿಸಿದ ಸೌಲಭ್ಯ |
|---|---|---|
| 1 | ರೂ.500/- ಗಳ ಸಭಾ ಭತ್ಯೆಯನು ನೀಡಲಾಗುತ್ತಿದೆ | ಸಭಾ ಭತ್ಯೆಯನ್ನು ರೂ.500 /- ರಿಂದ ರೂ.750/- ಕ್ಕೆ ಹೆಚ್ಚಿಸಿದೆ. |
| 2 | ವಿವಿಧ ಅಕಾಡೆಮಿಗಳ ಅಧ್ಯಕ್ಷರುಗಳಿಗೆ ಕಚೇರಿಗೆ ಸಂಬಂಧಪಟ್ಟ ಕೆಲಸಕಾರ್ಯಗಳ ಸ್ಥಳೀಯ ಪ್ರವಾಸಕ್ಕಾಗಿ ಮಾಸಿಕ ರೂ.10,000/- ರಂತೆ ಪ್ರಯಾಣ ಭತ್ಯೆಯನ್ನು ಮಂಜೂರು ಮಾಡಿದೆ. | ಸರ್ಕಾರ ನಿಗದಿಪಡಿಸಿರುವ ದರಪಟ್ಟಿಯಂತೆ ಖಾಸಗಿ ಸಂಸ್ಥೆಯಿಂದ ಒಂದು ವಾಹನವನ್ನು ಪಡೆದುಕೊಳ್ಳುವುದು, ಮಾಸಿಕ ರೂ.30,000/- ವೆಚ್ಚದ ಗರಿಷ್ಠ ಮಿತಿಯನ್ನು ನಿಗದಿಪಡಿಸಿದೆ. |

3/...

| | | |
|---|---|---|
| 3 | ವಿವಿಧ ಅಕಾಡೆಮಿಗಳ ಅಧ್ಯಕ್ಷರುಗಳಿಗೆ ಮಾಸಿಕ ಗೌರವಧನ ರೂ.20,000/- ವನ್ನು ನೀಡಲಾಗುತ್ತಿದೆ. | ಮಾಸಿಕ ಗೌರವಧನವನ್ನು ರೂ.20,000/- ರಿಂದ ರೂ.25,000/- ಗಳಿಗೆ ಹೆಚ್ಚಿಸಿದೆ. |
| 4 | ಜರೂರು ಸಂದರ್ಭದಲ್ಲಿ ರಿಜಿಸ್ಟ್ರಾರ್/ ಲೆಕ್ಕಪತ್ರಾಧಿಕಾರಿ ಯಾರಾದರೂ ಒಬ್ಬರ ಸಹಿಯಲ್ಲಿ ಡ್ರಾ ಮಾಡಬಹುದಾದ ಮೊತ್ತ ರೂ.1,000/- ಗಳಿದೆ. | ಈ ಮೊತ್ತವನ್ನು ರೂ.1,000/- ದಿಂದ ರೂ.10,000/- ಗಳಿಗೆ ಹೆಚ್ಚಿಸಿದೆ. |
| 5 | ಅಧ್ಯಕ್ಷರು ತಮ್ಮ ವಿವೇಚನೆ ಮೇರೆಗೆ ಪ್ರತಿವರ್ಷ ರೂ.20,000/- ಗಳನ್ನು ವೆಚ್ಚ ಮಾಡಬಹುದು | ಈ ಮೊತ್ತವನ್ನು ರೂ.20,000/- ದಿಂದ ರೂ.50,000/- ಗಳಿಗೆ ಹೆಚ್ಚಿಸಿದೆ. |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/147/ವೆಚ್ಚ-7/2018, ದಿನಾಂಕ:07-03-2018 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

26/3/18

[ಟಿ.ಎಸ್.ಮಾಲತಿ]
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.

ಗೆ:

1. ಮಹಾಲೇಖಪಾಲರು, ( ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಕಾಡೆಮಿಗಳ ಅಧ್ಯಕ್ಷರುಗಳು (ನಿರ್ದೇಶಕರ ಮುಖಾಂತರ)
4. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಕಾಡೆಮಿಗಳ ರಿಜಿಸ್ಟ್ರಾರುಗಳು (ನಿರ್ದೇಶಕರ ಮುಖಾಂತರ)
5. ಸರ್ಕಾರದ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು / ಪತ್ರಾಗಾರ ಇಲಾಖೆ.